ಕೈಗಾರಿಕೆಗಳನ್ನು ಸ್ಥಾಪಿಸಿ ಈ ಭಾಗದ ಜನರು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿ ಹೊಂದಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

ಆ) ಹಾಗಿದ್ದಲ್ಲಿ, ಯಾವ ಅವಧಿಯೊಳಗಾಗಿ ಇಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲಾಗುವುದು ?

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು)–

ಅ) ಈ ಪ್ರದೇಶದಲ್ಲಿ ಕೈಗಾರಿಕಾ ಪ್ರದೇಶ / ವಸಾಹತುಗಳನ್ನು ಸ್ಥಾಪಿಸಿ, ಕೈಗಾರಿಕೆಗಳನ್ನು ಖಾಸಗಿ ವಲಯದಿಂದ ಸ್ಥಾಪಿಸಲು ಅನುಕೂಲ ಮಾಡಲಾಗುವುದು ಮತ್ತು ಕೈಗಾರಿಕೆಗಳನ್ನು ಸ್ಥಾಪಿಸಲು ಮುಂದೆ ಬಂದಂತಹ ಕೈಗಾರಿಕೋದ್ಯಮಿಗಳಿಗೆ ಕೈಗಾರಿಕಾ ನೀತಿಯ ಅನ್ವಯ ಬೆಂಬಲ ಮತ್ತು ಪ್ರೋತ್ಸಾಹವನ್ನು ಸರ್ಕಾರದ ವತಿಯಿಂದ ನೀಡಲಾಗುವುದು.

ಆ) ಹಾಲಿ ಇರುವ ಕೈಗಾರಿಕಾ ವಲಯವನ್ನು ವಿಸ್ತರಿಸಿ ಹೆಚ್ಚುವರಿ ಜಮೀನನ್ನು ಗುರುತಿಸುವ ಕಾರ್ಯ ಕೈಗೊಳ್ಳಲಾಗಿದೆ. ಮುಂದಿನ 2/3 ವರ್ಷಗಳಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಿ ಕೈಗಾರಿಕೆಗಳ ಸ್ಥಾಪನೆಗೆ ಅನುಕೂಲ ಮಾಡಲಾಗುವುದು.

241 (289) – ಶ್ರೀ ನಿಂಗಪ್ಪ ಹೆಚ್. (ಕುಣಿಗಲ್) – ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಂಪೂರ್ಣವಾಗಿ ಪಾನ ನಿರೋಧ ಜಾರಿಗೆ ತರಲು ಸರ್ಕಾರ ಉತ್ಸುಕವಾಗಿದೆಯೇ ;

ಆ) ಹಾಗಿದ್ದಲ್ಲಿ, ಯಾವ ಅವಧಿಯೊಳಗಾಗಿ ಜಾರಿಗೆ ತರಲಾಗುವುದು ;

ಇ) ಸಂಪೂರ್ಣ ಪಾನ ನಿರೋಧ ಜಾರಿಗೆ ತರದೇ ಬರೀ ಸಾರಾಯಿ ಮಾರಾಟವನ್ನು ಮಾತ್ರ ರದ್ದು ಮಾಡಲು ಕಾರಣಗಳೇನು ?

ಅ) ಸಾರಾಯಿಯನ್ನು ಮಾತ್ರ ರದ್ದುಪಡಿಸುವ ಪ್ರಕ್ರಿಯೆಯ ಬಗ್ಗೆ ಸರ್ಕಾರವು ಚಿಂತನೆ ನಡೆಸಿದೆ.

ಆ) ಸರ್ಕಾರದ ಮೇಲೆ ಇದರಿಂದಾಗುವ ಸಾಮಾಜಿಕ ಪರಿಣಾಮ ಮತ್ತು ಆರ್ಥಿಕ ಪರಿಣಾಮಗಳಂತಹ ಸಮಸ್ಯೆಗಳನ್ನು ಪರಿಗಣಿಸಿ, ಅಂತಿಮ ತೀರ್ಮಾನ ಕೈಗೊಳ್ಳಬೇಕಾಗಿದೆ. ಸಾರಾಯಿ ರದ್ದುಗೊಳಿಸುವ ವಿಷಯವು ಸರ್ಕಾರದ ಚಿಂತನೆಯಲ್ಲಿದ್ದು, ಸಮಾಜದ ಮೇಲೆ ಆಗುವ ಸಾಮಾಜಿಕ

ಪರಿಣಾಮ ಮತ್ತು ಸರ್ಕಾರದ ಮೇಲೆ ಆಗುವ ಆರ್ಥಿಕ ಸ್ಥಿತಿಗತಿಗಳ ಪರಿಣಾಮದ ಹಾಗೂ ಇತರೆ ತತ್ಸಂಬಂಧದ ಪರಿಣಾಮಗಳ ಬಗ್ಗೆ ವಿವಿಧ ಹಂತಗಳಲ್ಲಿ ಮೌಲ್ಯಮಾಪನಗಳನ್ನು ನಡೆಸಿದ ನಂತರ ಅಂತಿಮ ತೀರ್ಮಾನಕ್ಕೆ ಬರಲಾಗುವುದು. ಆದ್ದರಿಂದ ಈ ಹಂತದಲ್ಲಿ ಈ ಪ್ರಶ್ನೆಗಳಿಗೆ ಸ್ಪಷ್ಟ ಹಾಗೂ ನಿಖರವಾದ ಉತ್ತರ ನೀಡಲು ಸಾಧ್ಯತೆ ಇರುವುದಿಲ್ಲ.

ಆ) ಸಾರಾಯಿ ಸಮಾಜದ ಕಡುಬಡವರ ಮತ್ತು ಕೂಲಿ ಕಾರ್ಮಿಕರ ಪಾನೀಯವಾಗಿದ್ದು, ಸಾರಾಯಿಯಿಂದ ಅನೇಕ ಬಡ ಕುಟುಂಬಗಳು ಆರ್ಥಿಕ ಸಂಕಷ್ಟದಲ್ಲಿ ಸಿಲುಕಿದೆ. ಇದಲ್ಲದೆ, ಸ್ತ್ರೀಶಕ್ತಿ ಸ್ವಸಹಾಯಕ ಸಂಘಗಳು, ದಲಿತ ಸಂಘರ್ಷ ಸಮಿತಿಗಳು ಸಾರಾಯಿ ನಿಷೇಧಿಸುವಂತೆ ರಾಜ್ಯದಾದ್ಯಂತ ಪ್ರತಿಭಟನೆಗಳು ನಡೆಸುತ್ತಿದ್ದು, ಸರ್ಕಾರವು ಸಾರಾಯಿ ಸೇವಿಸುವವರ ಆರ್ಥಿಕ ಸ್ಥಿತಿ ಮತ್ತು ಅವರ ಸಾಮಾಜಿಕ ಸ್ಥಿತಿಯನ್ನು ಮನಗಂಡು ಸಾರಾಯಿ ಮಾರಾಟವನ್ನು ಮಾತ್ರ ರದ್ದುಗೊಳಿಸಲು ಚಿಂತನೆ ನಡೆಸಿದೆ.

242 (290) - ಶ್ರೀ ನಿಂಗಪ್ಪ ಹೆಚ್. (ಕುಣಿಗಲ್) - ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಅದರಲ್ಲೂ ಮುಖ್ಯವಾಗಿ ಕುಣಿಗಲ್‌ನಲ್ಲಿರುವ ಕೆರೆಗಳು ಹೂಳಿನಿಂದ ತುಂಬಿ ಹೋಗಿ ಅವಶ್ಯಕ ನೀರು ಶೇಕರಣೆಯಾಗದೇ ಅಂತರ್ಜಲ ಮಟ್ಟ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಜಲ ಸಂವರ್ಧನೆಯ ಕಾರ್ಯಕ್ರಮವನ್ನು ಪ್ರಾರಂಭಿಸಬಹುದಲ್ಲವೆ ; ಈ ನಿಟ್ಟಿನಲ್ಲಿ ಸರ್ಕಾರ ಮುಂದಾಗುವುದೇ ;

ಇ) ಹಾಗಿದ್ದಲ್ಲಿ, ಯಾವ ಅವಧಿಯೊಳಗಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ)-

ಅ) ಬಂದಿದೆ.

ಆ) ವಿಶ್ವಬ್ಯಾಂಕ್ ನೆರವಿನಿಂದ ಜಲ ಸಂವರ್ಧನೆ ಯೋಜನಾ ಸಂಘವು ರಾಜ್ಯದ 9 ಜಿಲ್ಲೆಗಳ 34 ತಾಲ್ಲೂಕುಗಳ 2005 ಕೆರೆಗಳ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳುತ್ತಿದ್ದು, ಕೇಂದ್ರ ಸರ್ಕಾರದ ಸಲಹೆಯ ಮೇರೆಗೆ